ಸದರೀ ದರಖಾಸ್ತುದಾರರಾದ ಹೊಟ್ಟೇಗೌಡರ ಅರ್ಜಿಯನ್ನು 1887ನೇ ಇಸವಿ ಜುಲೈ ತಿಂಗಳು ತಾರೀಖು 26ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಈರೇಗೌಡರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಟ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಅರ್ಜೀ ನಂಬರ್ 275.

ಮೃತಪಟ್ಟ ಶಿವಂಣನವರ ಆಸ್ತಿ ವಿಷಯವಲ್ಲಿ—

ಅರ್ಜೀದಾರ ಶಂಕರಯ್ಯನವರು, ಮೃತಪಟ್ಟ ಸದರೀ ಶಿವಂಣನವರಿಗೆ ಸಹೋದರ ಆಗಬೇಕಂಬ ಹಕ್ಕುದಾರಿ ಮೇಲೆ ಮೈಸೂರು ಮಂಡೀ ಮೊಹಲ್ಲಾ ಸ್ಥಳದ ಸದರೀ ಶಂಕರಯ್ಯನವರು ಸದರೀ ವಾಸಸ್ಥರಾಗಿ ಮೃತಪಟ್ಟ ಶಿವಂಣನವರ ಜಿಂದಗಿ ಬಗ್ಯಾಗಿ ಬರತಕ್ಕ 2,000 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಇಶ್ಯೂ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಶಂಕರಯ್ಯನವರ ಅರ್ಜೀಯನ್ನು 1887ನೇ ಇಸವಿ ಜುಲ್ಯೈ ತಿಂಗಳು ತಾರೀಖು 28ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಶಿವಂಣನವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಟ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಯಿದೆ.

1887ನೇ ಇಸವಿ ಜೂನ್ ತಿಂಗಳು 23ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ಹಸ್ತಾಕ್ಷರದೊತ್ತೊಡನೆ ಕೊಡೋಣಾಗಿದೆ.

ಎಸ್. ಹೇಮಾಜಿರಾವ್,
ಡಿಸ್ಟ್ರಿಕ್ಟ್ ಜಡ್ಜ್.

ನಂ. 4. ತಾರೀಖು 18ನೇ ಜೂನ್ 1887.

ಯಡತೊರೆ ಸಬ್ ರಿಜಿಸ್ಟ್ರಾರ್ ಆಫೀಸ್‌ವಲ್ಲಿ ಇದರ ಕೆಳಗೆ ನಮೂದಿಸಿರುವ ದಸ್ತಾವೇಜುಗಳನ್ನ ಕ್ರಯವಾದ ವಾರಸುದಾರರಾಗಲಿ ಅಥವಾ ಅಧಿಕಾರ ಹೊಂದಿದ ಮುಕ್ತಾರೀಕನಾಗಲಿ ಈ ತಾರೀಖು ಲಾಗಾಯಿತು ಪ್ರೊಂದು ತಿಂಗಳು ಒಳಗಾಗಿ ಹಾಜರಾಗಿ ಖಾಪಸ್ ಪಡಿಯ ಬೇಕು, ತಪ್ಪಿದಲ್ಲಿ 1877ನೇ ಇಸವಿ 3ನೇ ನಂಬರ್ ರಿಜಿಸ್ಟ್ರೇಷ್ ಆಕ್ಟು 85ನೇ ಸೆಕ್ಷನ್ ಮೇರಿಗೆ ನಾಶಮಾಡಲ್ಪಡುತ್ತೆ.

ನಂಬರ್.	ದಸ್ತಾವೇಜು ಬರದು ಕೊಟ್ಟವರ ಹೆಸರು ಮತ್ತು ಅಡಿಷ್ಟ.	ದಸ್ತಾವೇಜು ಬರಿಸಿ ಕೊಂಡವರ ಹೆಸರು ಮತ್ತು ಅಡಿಷ್ಟ.	ರಿಜಿಸ್ಟ್ರಿಗೆ ಹಾಜರಾಗಬೇಕಾದ ತಾರೀಖು.	ರಿಜಿಸ್ಟ್ರಿ ಆಗಿ ಸಾಲಿ ಮುಗಿದ ತಾರೀಖು.	ದಸ್ತಾವೇಜಿನ ಸ್ವಭಾವ ವ ಕಿಮ್ಮತ್ತು.
31 1885—86	ಯಡತೊರೆ ತಾಲ್ಲೂಕು ಲಾಳನಕಟ್ಟೇಲಿರುವ ಡೊಂಣೆ ಮರೀಗೌಡನ ಸೊಸೆ ಮಲ್ಲಮ್ಮ, ಯಿವಳ ಮಗನ ಈರಂಣ ಉರಫೆ ಪುಟ್ಟು ಸಹ	ಯಡತೊರೆ ತಾಲ್ಲೂಕು ಲಾಳನಕಟ್ಟೇಲಿ ಯಿರುವ ಕೆಲ್ಲೂರು ಲಿಂಗೇಗೌಡನ ಮ ಚನ್ನೇಗೌಡ	1—4—85	18—4—85	(20) ರೂಪಾಯಿನ ಮನೆ ನಿವೇಶನ ಕ್ರಯಪತ್ರ.

ಟಿ. ಆನಂದರಾವ್,
ರಿಜಿಸ್ಟ್ರಾರ್.